# Akashvani : Bangalore
# National Bulletin In Kannada
# 29.11.2024 / 19.35 hrs

## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಮುಂದುವರಿದ ಪ್ರತಿಪಕ್ಷಗಳ ಗದ್ದಲ: ಸೋಮವಾರಕ್ಕೆ ಉಭಯ ಸದನಗಳ ಮುಂದೂಡಿಕೆ

೨. ದೇಶಾದ್ಯಂತ ೫ ಸಾವಿರದ ೬೦೦ ನ್ಯಾಯಾಧೀಶರ ಹುದ್ದೆಗಳು ಖಾಲಿ: ಲೋಕಸಭೆಗೆ ಕೇಂದ್ರ ಸರ್ಕಾರ ಮಾಹಿತಿ

೩. ಅಲ್ಪಸಂಖ್ಯಾತರ ರಕ್ಷಣೆಗೆ ಎಲ್ಲಾ ಕ್ರಮಗಳನ್ನು ಕೈಗೊಳ್ಳುವಂತೆ ಬಾಂಗ್ಲಾದೇಶಕ್ಕೆ ಭಾರತ ಕರೆ

೪. ಫಿಜಿಯ ಉಪಪ್ರಧಾನಿಯೊಂದಿಗೆ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ದ್ವಿಪಕ್ಷೀಯ ಮಾತುಕತೆ

೫. ಸಯ್ಯದ್ ಮೋದಿ ಬ್ಯಾಡ್ಮಿಂಟನ್ ಪಂದ್ಯಾವಳಿ: ಸೆಮಿಫೈನಲ್ಸ್ ಪ್ರವೇಶಿಸಿದ ಭಾರತದ ಪಿ.ವಿ.ಸಿಂಧು, ಲಕ್ಷ್ಯ ಸೇನ್

<><*<><>*><>

ಸಂಸತ್ತಿನ ಚಳಿಗಾಲದ ಅಧಿವೇಶನದ ನಾಲ್ಕನೇ ದಿನವಾದ ಇಂದೂ ಸಹ ಉಭಯ ಸದನಗಳಲ್ಲಿ ಪ್ರತಿಪಕ್ಷಗಳ ಗದ್ದಲ-ಕೋಲಾಹಲದಿಂದ ಕಲಾಪಕ್ಕೆ ಅಡ್ಡಿ ಉಂಟಾಯಿತು. ಕೈಗಾರಿಕೋದ್ಯಮಿಯೊಬ್ಬರ ವಿರುದ್ಧ ಲಂಚ ಆರೋಪ ಸೇರಿದಂತೆ ಹಲವು ವಿಷಯ ಪ್ರಸ್ತಾಪಿಸಿದ ಪ್ರತಿಪಕ್ಷಗಳು ಗದ್ದಲ ಸೃಷ್ಟಿಸಿದ್ದರಿಂದ ರಾಜ್ಯಸಭೆ ಹಾಗೂ ಲೋಕಸಭೆಯ ಕಲಾಪವನ್ನು ಸೋಮವಾರಕ್ಕೆ ಮುಂದೂಡಲಾಯಿತು. ಲೋಕಸಭೆ ಇಂದು ಬೆಳಗ್ಗೆ ಸಮಾವೇಶಗೊಂಡಾಗ ಕಾಂಗ್ರೆಸ್, ಡಿಎಂಕೆ, ಸಮಾಜವಾದಿ ಪಕ್ಷ ಮತ್ತಿತರ ಪ್ರತಿಪಕ್ಷಗಳ ಸಂಸದರು ಘೋಷಣೆ ಕೂಗಲು ಆರಂಭಿಸಿದರು. ಕೊಲಾಹಲದ ನಡುವೆ ಸ್ಪೀಕರ್ ಓಂ ಬಿರ್ಲಾ ಪ್ರಶ್ನೋತ್ತರ ಕಲಾಪವನ್ನು ನಡೆಸಲು ಮುಂದಾದರು. ಪ್ರತಿಭಟನಾನಿರತ ಸದಸ್ಯರು ತಮ್ಮ ಆಸನಗಳಿಗೆ ಹಿಂದುರುಗುವಂತೆ ಹಲವು ಬಾರಿ ಮನವಿ ಮಾಡಿ, ದೇಶದ ಜನರು ಸುಗಮ ಕಲಾಪ ನಡೆಸಬೇಕೆಂದು ಬಯಸಿದ್ದಾರೆ ಎಂದರು. ಸದನವನ್ನು ಸುಗಮವಾಗಿ ನಡೆಸಲು ಸಹಕರಿಸುವಂತೆ ಪ್ರತಿಭಟನಾನಿರತ ಸದಸ್ಯರಿಗೆ ಮನವಿ ಮಾಡಿದರು. ಗದ್ದಲ ಮುಂದುವರೆದ ಕಾರಣ ಸ್ಪೀಕರ್ ಓಂ ಬಿರ್ಲಾ, ಮೊದಲಿಗೆ ಕಲಾಪವನ್ನು ಅಪರಾಹ್ನ ೧೨ ಗಂಟೆಗೆ, ನಂತರ, ಸೋಮವಾರಕ್ಕೆ ಮುಂದೂಡಿದರು.

<><*<><>*><>

ದೇಶಾದ್ಯಂತ ನ್ಯಾಯಾಂಗದಲ್ಲಿ ೫ ಸಾವಿರದ ೬೦೦ಕ್ಕೂ ಹೆಚ್ಚು ನ್ಯಾಯಾಧೀಶರ ಹುದ್ದೆಗಳು ಖಾಲಿಯಿವೆ ಎಂದು ಕೇಂದ್ರ ಸರ್ಕಾರ ಮಾಹಿತಿ ನೀಡಿದೆ. ಲೋಕಸಭೆಯಲ್ಲಿಂದು ಲಿಖಿತ ಉತ್ತರ ನೀಡಿದ ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್, ಸುಪ್ರೀಂ ಕೋರ್ಟ್‌ನಲ್ಲಿ ಎರಡು, ಹೈಕೋರ್ಟ್‌ಗಳಲ್ಲಿ ೩೬೪ ಮತ್ತು ಜಿಲ್ಲಾ ಮತ್ತು ಅಧೀನ ನ್ಯಾಯಾಲಯಗಳಲ್ಲಿ ಐದು ಸಾವಿರಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇವೆ. ಕಳೆದ ಐದು ವರ್ಷಗಳಲ್ಲಿ ದೇಶದ ವಿವಿಧ ಹೈಕೋರ್ಟ್‌ಗಳಲ್ಲಿ ಸುಮಾರು ೫೦೦ ನ್ಯಾಯಾಧೀಶರನ್ನು ನೇಮಿಸಲಾಗಿದೆ ಎಂದು ಅವರು ತಿಳಿಸಿದರು. ಅಸ್ತಿತ್ವದಲ್ಲಿರುವ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಲು ಎಲ್ಲ ಪ್ರಯತ್ನಗಳನ್ನು ಕೈಗೊಳ್ಳಲಾಗುವುದು ಎಂದರು. ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವರು, ಐದು ವರ್ಷಗಳಿಗೂ ಹೆಚ್ಚು ಕಾಲದಿಂದ ೧೯ ಸಾವಿರದ ೫೦೦ ಕ್ಕೂ ಹೆಚ್ಚು ಪ್ರಕರಣಗಳು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಉಳಿದಿವೆ. ಇನ್ನು ವಿವಿಧ ಹೈಕೋರ್ಟ್‌ಗಳಲ್ಲಿ ಐದು ವರ್ಷಗಳಿಗೂ ಹೆಚ್ಚು ಕಾಲದಿಂದ ೨೭ ಲಕ್ಷಕ್ಕೂ ಹೆಚ್ಚು ಪ್ರಕರಣಗಳು ಬಾಕಿ ಉಳಿದಿವೆ ಎಂದು ಮಾಹಿತಿ ನೀಡಿದರು.

<><*<><>*><>

ಪ್ರಧಾನಮಂತ್ರಿ ಭಾರತೀಯ ಜನೌಷಧ ಯೋಜನೆ ಅಡಿಯಲ್ಲಿ ೨೦೨೭ರ ಮಾರ್ಚ್ ವೇಳಗೆ ದೇಶಾದ್ಯಂತ ೨೫ ಸಾವಿರ ದೇಶಾದ್ಯಂತ ೨೫ ಸಾವಿರ ಜನೌಷಧ ಕೇಂದ್ರಗಳನ್ನು ತೆರೆಯುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ಕೇಂದ್ರ ಹೊಂದಿದೆ ಎಂದು ಕೇಂದ್ರ ಸಚಿವೆ ಅನುಪ್ರಿಯಾ ಪಟೇಲ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಲಿಖಿತ ಉತ್ತರ ನೀಡಿದ ಲಿಖಿತ ಉತ್ತರ ನೀಡಿದ ಅವರು, ಈ ವರ್ಷದ ಮಾರ್ಚ್ ಅಂತ್ಯದವರೆಗೆ ಒಟ್ಟು ೧೪ ಸಾವಿರದ ೧೩೧ ಕೇಂದ್ರಗಳನ್ನು ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಮಾಹಿತಿ ನೀಡಿದರು. ದೇಶದಲ್ಲಿ ವೈದ್ಯರು ಹಾಗೂ ಜನರ ಅನುಪಾತ ಸುಮಾರು ಅನುಪಾತ ಸುಮಾರು ೧ ಕ್ಕೆ ೮೧೧ ರಷ್ಟಿದ್ದು, ಇದು ವಿಶ್ವ ಆರೋಗ್ಯ ಸಂಸ್ಥೆಯ ಮಾನದಂಡವಾದ ೧ ಕ್ಕೆ ೧೦೦೦ ಕ್ಕಿಂತ ಕ್ಕೆ ೧೦೦೦ ಕ್ಕಿಂತ ಉತ್ತಮವಾಗಿದೆ. ರಾಷ್ಟ್ರೀಯ ವೈದ್ಯಕೀಯ ಆಯೋಗ ಮತ್ತು ರಾಜ್ಯ ವೈದ್ಯಕೀಯ ಮಂಡಳಿಗಳಲ್ಲಿ ವೈದ್ಯಕೀಯ ಮಂಡಳಿಗಳಲ್ಲಿ ೧೩ ಲಕ್ಷ ೮೬ ಸಾವಿರಕ್ಕೂ ಹೆಚ್ಚು ಅಲೋಪತಿ ವೈದ್ಯರು ಮತ್ತು ೬ ಲಕ್ಷ ೧೪ ಸಾವಿರ ೬ ಲಕ್ಷ ೧೪ ಸಾವಿರ ಆಯುಷ್ ವೈದ್ಯರು ನೋಂದಾಯಿಸಿಕೊಂಡಿದ್ದಾರೆ ಎಂದು ತಿಳಿಸಿದರು. ಕಳೆದ ೧೦ ವರ್ಷಗಳಲ್ಲಿ ವರ್ಷಗಳಲ್ಲಿ ದೇಶದ ವೈದ್ಯಕೀಯ ಕಾಲೇಜುಗಳ ಸಂಖ್ಯೆ ೩೮೭ ರಿಂದ ೭೮೦ ಕ್ಕೆ ಏರಿಕೆಯಾಗಿದೆ. ೨೦೧೪ ರಿಂದೀಚೆಗೆ

೨೦೧೪ ರಿಂದೀಚೆಗೆ ಎಂಬಿಬಿಎಸ್ ಸೀಟುಗಳು ೫೧ ಸಾವಿರದ ೩೪೮ ರಿಂದ ಸುಮಾರು ೧ ಲಕ್ಷ ೧೮ ಸಾವಿರಕ್ಕೆ ಅಂದರೆ ಶೇಕಡ ಅಂದರೆ ಶೇಕಡ ೧೩೦ ರಷ್ಟು ಹೆಚ್ಚಳವಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

<><*<><>*><>

ಪ್ರಧಾನಮಂತ್ರಿ ಭಾರತೀಯ ಜನೌಷಧ ಯೋಜನೆ ಅಡಿಯಲ್ಲಿ ೨೦೨೭ರ ಮಾರ್ಚ್ ವೇಳಗೆ ದೇಶಾದ್ಯಂತ ೨೫ ಸಾವಿರ ಜನೌಷಧ ಕೇಂದ್ರಗಳನ್ನು ತೆರೆಯುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ಕೇಂದ್ರ ಸಚಿವೆ ಅನುಪ್ರಿಯಾ ಪಟೇಲ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಲಿಖಿತ ಉತ್ತರ ನೀಡಿದ ಅವರು, ಈ ವರ್ಷದ ಮಾರ್ಚ್ ಅಂತ್ಯದವರೆಗೆ ಒಟ್ಟು ೧೪ ಸಾವಿರದ ೧೫೧ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಮಾಹಿತಿ ನೀಡಿದರು.  ದೇಶದಲ್ಲಿ ವೈದ್ಯರು ಹಾಗೂ ಜನರ ಅನುಪಾತ ಸುಮಾರು ೧ ಕ್ಕೆ ೮೧೧ ರಷ್ಟಿದ್ದು, ಇದು ವಿಶ್ವ ಆರೋಗ್ಯ ಸಂಸ್ಥೆಯ ಮಾನದಂಡವಾದ ೧ ಕ್ಕೆ ೧೦೦೦ ಕ್ಕಿಂತ ಉತ್ತಮವಾಗಿದೆ. ರಾಷ್ಟ್ರೀಯ ವೈದ್ಯಕೀಯ ಆಯೋಗ ಮತ್ತು ರಾಜ್ಯ ವೈದ್ಯಕೀಯ ಮಂಡಳಿಗಳಲ್ಲಿ ೧೩ ಲಕ್ಷ ೮೬ ಸಾವಿರಕ್ಕೂ ಹೆಚ್ಚು ಅಲೋಪತಿ ವೈದ್ಯರು ಮತ್ತು ೬ ಲಕ್ಷ ೧೪ ಸಾವಿರ ಆಯುಷ್ ವೈದ್ಯರು ನೋಂದಾಯಿಸಿಕೊಂಡಿದ್ದಾರೆ ಎಂದು ತಿಳಿಸಿದರು. ಕಳೆದ ೧೦ ವರ್ಷಗಳಲ್ಲಿ ದೇಶದ ವೈದ್ಯಕೀಯ ಕಾಲೇಜುಗಳ ಸಂಖ್ಯೆ ೩೮೭ ರಿಂದ ೭೮೦ ಕ್ಕೆ ಏರಿಕೆಯಾಗಿದೆ. ೨೦೧೪ ರಿಂದೀಚೆಗೆ ಎಂಬಿಬಿಎಸ್ ಸೀಟುಗಳು ೫೧ ಸಾವಿರದ ೩೪೮ ರಿಂದ ಸುಮಾರು ೧ ಲಕ್ಷ ೧೮ ಸಾವಿರಕ್ಕೆ ಅಂದರೆ ಶೇಕಡ ೧೩೦ ರಷ್ಟು ಹೆಚ್ಚಳವಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

<><*<><>*><>

ವಿವಿಧ ಸಚಿವಾಲಯಗಳಿಗೆ ಸಂಬಂಧಿಸಿದ ಕಾಗದಪತ್ರಗಳನ್ನು ರಾಜ್ಯಸಭೆಯಲ್ಲಿಂದು ಮಂಡನೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ವಕ್ಫ್ ತಿದ್ದುಪಡಿ ಮಸೂದೆಯ ಸಂಬಂಧ ರಚಿಸಲಾಗಿರುವ ಜಂಟಿ ಸಂಸದೀಯ ಸಮಿತಿಯ ಕಾರ್ಯಾವಧಿಯನ್ನು ೨೦೨೫ರ ಬಜೆಟ್ ಅಧಿವೇಶನದ ಕೊನೆಯ ದಿನದವರೆಗೆ ವಿಸ್ತರಿಸಿರುವ ಕುರಿತು ಸದನಕ್ಕೆ ಮಾಹಿತಿ ನೀಡಲಾಯಿತು. ಕೇಂದ್ರ ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಎಲ್.ಮುರುಗನ್, ಸರ್ಕಾರದ ಕಾರ್ಯಕ್ರಮಗಳ ಕುರಿತ ಮಾಹಿತಿ ನೀಡಿದರು. ಬರುವ ಸೋಮವಾರ ಮಂಡನೆಯಾಗುವ ಮಸೂದೆಗಳ ಕುರಿತು ಮಾಹಿತಿ ನೀಡಿದರು. ಈ ವೇಳೆ ಸಭಾಪತಿ ಜಗದೀಪ್ ಧನಕರ್, ನಿಯಮ ೨೬೭ ರ ಅಡಿಯಲ್ಲಿ ಚರ್ಚೆ ನಡೆಸುವ ಬಗ್ಗೆ ನೋಟಿಸ್ ನೀಡಲಾಗಿದೆ. ನಿಗದಿತ ಕಲಾಪ ಮತ್ತು ಪ್ರಶ್ನೋತ್ತರ ಕಲಾಪವನ್ನು ಭಂಗಗೊಳಿಸುವ ಸಾಧನವಾಗಿ ನಿಯಮ ೨೬೭ ಅನ್ನು ಬಳಕೆ ಮಾಡಿಕೊಳ್ಳಲಾಗುತ್ತಿದೆ. ಈ ಬಗ್ಗೆ ಪುನರ್ ವಿಮರ್ಶೆ ಮಾಡಿಕೊಳ್ಳಬೇಕಾಗಿದೆ ಎಂದರು. ಕೈಗಾರಿಕೋದ್ಯಮಿಯೊಬ್ಬರ ವಿರುದ್ಧದ ಲಂಚ ಆರೋಪ, ಮಣಿಪುರ ಹಿಂಸಾಚಾರ, ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ಹಿಂಸೆ, ಇಸ್ಕಾನ್, ಚಿನ್ಮಯ ಕೃಷ್ಣ ದಾಸ್ ಅವರ ಬಂಧನದ ಬಗ್ಗೆ ಚರ್ಚೆ ನಡೆಸುವಂತೆ ವಿರೋಧ ಪಕ್ಷಗಳ ಸದಸ್ಯರು ಗದ್ದಲ ನಡೆಸಿದ್ದರಿಂದ ಸದನದ ಕಲಾಪವನ್ನು ಸೋಮವಾರ ಬೆಳಗ್ಗೆ ೧೧ಕ್ಕೆ ಮುಂದೂಡಲಾಯಿತು.

<><*<><>*><>

ಅಲ್ಪಸಂಖ್ಯಾತರ ರಕ್ಷಣೆಗೆ ಎಲ್ಲಾ ಕ್ರಮಗಳನ್ನು ಕೈಗೊಳ್ಳುವಂತೆ ಬಾಂಗ್ಲಾದೇಶಕ್ಕೆ ಭಾರತ ಕರೆ ನೀಡಿದೆ. ನವದೆಹಲಿಯಲ್ಲಿ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಹಿಂದೂಗಳು ಮತ್ತು ಇತರೆ ಅಲ್ಪಸಂಖ್ಯಾತರ ಮೇಲಿನ ಬೆದರಿಕೆಗಳು ಮತ್ತು ಉದ್ದೇಶಿತ ದಾಳಿಗಳ ಬಗ್ಗೆ ಬಾಂಗ್ಲಾದೇಶ ಸರ್ಕಾರದೊಂದಿಗೆ ಭಾರತವು ನಿರಂತರವಾಗಿ ಪ್ರಸ್ತಾಪಿಸುತ್ತಿದೆ ಎಂದು ತಿಳಿಸಿದರು.  ಎಲ್ಲಾ ಅಲ್ಪಸಂಖ್ಯಾತರನ್ನು ರಕ್ಷಿಸುವ ತನ್ನ ಜವಾಬ್ದಾರಿಯನ್ನು ಬಾಂಗ್ಲಾದೇಶದ ಮಧ್ಯಂತರ ಸರ್ಕಾರವು ನಿರ್ವಹಿಸಬೇಕು ಎಂಬ ಭಾರತದ ನಿಲುವು ಸ್ಪಷ್ಟವಾಗಿದೆ ಎಂದರು. ಇಸ್ಕಾನ್ ಸಂಸ್ಥೆಯು ಸಾಮಾಜಿಕ ಸೇವೆಯ ಮೂಲಕ ಜಾಗತಿಕವಾಗಿ ಗುರುತಿಸಲ್ಪಟ್ಟ ಸಂಸ್ಥೆಯಾಗಿದೆ. ಚಿನ್ಮಯ್ ಕೃಷ್ಣ ದಾಸ್ ಬಂಧನದ ಹಿನ್ನೆಲೆಯಲ್ಲಿ ಕಾನೂನು ಪ್ರಕ್ರಿಯೆಗಳು ಚಾಲ್ತಿಯಲ್ಲಿವೆ ಎಂದು ಜೈಸ್ವಾಲ್ ತಿಳಿಸಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ಒಡಿಶಾಗೆ ಮೂರು ದಿನಗಳ ಪ್ರವಾಸ ಕೈಗೊಂಡಿದ್ದಾರೆ. ಪ್ರಧಾನಿ ಮೋದಿ ಅವರು ಪ್ರಧಾನಿ ಮೋದಿ ಅವರು ಇಂದು ಸಂಜೆ ಭುವನೇಶ್ವರ ತಲುಪಿದರು. ಬಿಜು ಪಟ್ನಾಯಕ್ ಅಂತಾರಾಷ್ಟ್ರೀಯ ವಿಮಾನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಮಾತನಾಡಿದರು. ಭುವನೇಶ್ವರದಲ್ಲಿ ನಾಳೆ ನಡೆಯಲಿರುವ ಅಖಿಲ ಭಾರತ ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾನಿರ್ದೇಶಕರು ಹಾಗೂ ಮಹಾನಿರೀಕ್ಷಕರ ಸಮ್ಮೇಳನದಲ್ಲಿ ಅವರು ಭಾಗವಹಿಸಲಿದ್ದಾರೆ.  ಮೂರು ದಿನಗಳ ಮೂರು ದಿನಗಳ ಸಮ್ಮೇಳನ ಇಂದಿನಿಂದ ಆರಂಭಗೊಂಡಿದ್ದು, ಭಯೋತ್ಪಾದನೆ ನಿಗ್ರಹ, ನಕ್ಸಲ್ ಉಗ್ರವಾದ, ಕರಾವಳಿ ಉಗ್ರವಾದ, ಕರಾವಳಿ ಭದ್ರತೆ, ಹೊಸ ಕ್ರಿಮಿನಲ್ ಕಾನೂನುಗಳು, ಮಾದಕ ವಸ್ತುಗಳು ಸೇರಿದಂತೆ ರಾಷ್ಟ್ರೀಯ ಭದ್ರತೆಗೆ ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಪ್ರಮುಖ ಅಂಶಗಳು ಸಮ್ಮೇಳನದಲ್ಲಿ ಚರ್ಚಿಸಲಾಗುತ್ತದೆ.  ವಿಶೇಷ ಸೇವೆಗಾಗಿ ವಿಶೇಷ ಸೇವೆಗಾಗಿ ಪೊಲೀಸ್ ಅಧಿಕಾರಿಗಳಿಗೆ ರಾಷ್ಟ್ರಪತಿ ಪೊಲೀಸ್ ಪದಕಗಳನ್ನು ಸಮ್ಮೇಳನದಲ್ಲಿ ಪ್ರದಾನ ಸಮ್ಮೇಳನದಲ್ಲಿ ಪ್ರದಾನ ಮಾಡಲಾಗುತ್ತದೆ.  ಕೇಂದ್ರ ಗೃಹ ಸಚಿವ ಅಮಿತ್ ಶಾ, ರಾಷ್ಟ್ರೀಯ ಭದ್ರತಾ ಸಲಹೆಗಾರ

ಭದ್ರತಾ ಸಲಹೆಗಾರ ಅಜಿತ್ ದೋವಲ್, ಪ್ರಧಾನಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಪಿ.ಕೆ.ಮಿಶ್ರಾ ಸೇರಿದಂತೆ ಹಲವು ಸೇರಿದಂತೆ ಹಲವು ಪ್ರಮುಖರು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

**<><*<><>*><>**

ದೇಶದ ಬಹಳಷ್ಟು ಜನರ ಜೀವನವನ್ನು ಪ್ರಗತಿಯತ್ತ ಕೊಂಡೊಯ್ಯಲು ಪ್ರವಾಸೋದ್ಯಮ ಸಮರ್ಥವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅಭಿಪ್ರಾಯಪಟ್ಟಿದ್ದಾರೆ. ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ದೇಶದ ಪ್ರಸಿದ್ಧ ಪ್ರವಾಸಿ ಸ್ಥಳಗಳ ಅಭಿವೃದ್ಧಿಗೆ ೪೦ ಯೋಜನೆಗಳನ್ನು ಅನುಮೋದಿಸಿರುವ ಬಗ್ಗೆ ಪ್ರಕಟಿಸಿದ್ದರು. ಈ ಸುದ್ದಿಯನ್ನು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿರುವ ಪ್ರಧಾನಿ, ಪ್ರವಾಸೋದ್ಯಮ ವಲಯದ ಮೂಲಸೌಕರ್ಯ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಆದ್ಯತೆ ನೀಡುವುದನ್ನು ಮುಂದುವರಿಸಲಿದೆ. ವಿಸ್ಮಯಕಾರಿ ಭಾರತದ ಅದ್ಭುತಗಳನ್ನು ಹೆಚ್ಚು ಜನ ಅನುಭವಿಸುವಂತಾಗಲು ನಿರಂತರವಾಗಿ ಪ್ರಯತ್ನ ನಡೆಸಲಾಗುವುದು ಎಂದು ಹೇಳಿದ್ದಾರೆ.

**<><*<><>*><>**

ಫಿಜಿಯ ಉಪಪ್ರಧಾನಿ ಮನೋವಾ ಕಾಮಿಕಾಮಿಕಾ ಅವರು ದೆಹಲಿಯಲ್ಲಿಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿಯಾಗಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಭಾರತದಲ್ಲಿನ ಸಹಕಾರಿ ಸಂಸ್ಥೆಗಳು ಮತ್ತು ಇತರೆ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಮನೋವಾ ಅವರ ಸಕಾರಾತ್ಮಕ ಅನಿಸಿಕೆಗಳನ್ನು ಆಲಿಸಿ ಡಾ. ಜೈಶಂಕರ್ ಹರ್ಷ ವ್ಯಕ್ತಪಡಿಸಿದರು. ಸಾವಯವ ಕೃಷಿ, ತಂತ್ರಜ್ಞಾನ ಮತ್ತು ಡಿಜಿಟಲ್ ಉಪಕರಣಗಳ ಸಂಭಾವ್ಯ ಸಾಮರ್ಥ್ಯದ ಕುರಿತು ಉಭಯ ನಾಯಕರು ಚರ್ಚಿಸಿದರು. ದ್ವಿಪಕ್ಷೀಯ ಸಂಬಂಧಗಳನ್ನು ಬಲಗೊಳಿಸಲು ಫಿಜಿಯ ಉಪಪ್ರಧಾನಿ ಬೆಂಬಲ ಸೂಚಿಸಿರುವುದನ್ನು ತಾನು ಗೌರವಿಸುವುದಾಗಿ ಡಾ. ಜೈಶಂಕರ್ ಹೇಳಿದರು.

**<><*<><>*><>**

ಮಹಾರಾಷ್ಟ್ರದ ಗೊಂಡಿಯಾ ಜಿಲ್ಲೆಯ ಸಡಕ್ ಅರ್ಜುನಿಯಲ್ಲಿ ಇಂದು ನಡೆದ ಅಪಘಾತದಲ್ಲಿ ಕನಿಷ್ಠ ೯ ಪ್ರಯಾಣಿಕರು ಸಾವನ್ನಪ್ಪಿದ್ದು, ಇತರೆ ೩೦ ಜನರು ಗಾಯಗೊಂಡಿದ್ದಾರೆ. ಭಂಡಾರದಿಂದ ಗೊಂಡಿಯಾಗೆ ತೆರಳುತ್ತಿದ್ದ ಮಹಾರಾಷ್ಟ್ರ ಸರ್ಕಾರಿ ಸಾರಿಗೆ ಬಸ್, ಬೃಂದಾವನ್ ಗ್ರಾಮದ ಸಮೀಪ ಚಾಲಕನ ನಿಯಂತ್ರಣ ತಪ್ಪಿ ಅಪಘಾತಕ್ಕೀಡಾಯಿತು. ಗಾಯಗೊಂಡವರನ್ನು ಗೊಂಡಿಯಾ ಜಿಲ್ಲಾ ಆಸ್ಪತ್ರೆಗೆ ದಾಖಲಾಗಿಸಲಾಗಿದೆ.

**<><*<><>*><>**

ಉತ್ತರ ಪ್ರದೇಶದ ಲಕ್ನೋದ ಬಾಬು ಬನಾರಸಿ ದಾಸ್ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಸಯ್ಯದ್ ಮೋದಿ ಅಂತಾರಾಷ್ಟ್ರೀಯ ಸೂಪರ್ ೩೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಶಟ್ಲರ್‌ಗಳಾದ ಪಿ.ವಿ.ಸಿಂಧು ಮತ್ತು ಲಕ್ಷ್ಯ ಸೇನ್ ಸೆಮಿಫೈನಲ್ಸ್ ಪ್ರವೇಶಿಸಿದ್ದಾರೆ. ಪುರುಷರ ಸಿಂಗಲ್ಸ್ ವಿಭಾಗದ ಕ್ವಾಟರ್‌ಫೈನಲ್ಸ್ ಪಂದ್ಯದಲ್ಲಿ ಮೀರಾಬಾ ಲುವಾಂಗ್ ಮೈಸ್ನಮ್ ಅವರನ್ನು ೨೧-೮, ೨೧-೧೯ ಸೆಟ್‌ಗಳಿಂದ ಲಕ್ಷ್ಯ ಸೇನ್ ಪರಾಭವಗೊಳಿಸಿದರು. ಇನ್ನೊಂದೆಡೆ, ಪುರುಷರ ಸಿಂಗಲ್ಸ್ ವಿಭಾಗದ ಕ್ವಾಟರ್‌ಫೈನಲ್ಸ್ ಪಂದ್ಯದಲ್ಲಿ ಚೀನಾದ ದೈ ವಾಂಗ್ ಅವರನ್ನು ೨೧-೧೫, ೨೧-೧೭ ಸೆಟ್‌ಗಳಿಂದ ಸೋಲಿಸಿ, ಪಿ.ವಿ.ಸಿಂಧು ಸೆಮಿಫೈನಲ್ಸ್ ಪ್ರವೇಶಿಸಿದರು.

**<><*<><>*><>**

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೭೫೯ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೯ ಸಾವಿರದ ೮೦೨ ಅಂಕಗಳು ದಾಖಲಾಗಿದೆ. ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೨೧೬ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೧೩೧ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೪ ರೂಪಾಯಿ ೪೯ ಪೈಸೆಯಷ್ಟಾಗಿದೆ.

**<><*<><>*><>**

ಪ್ರಸಾರ ಭಾರತಿ ವೇವ್ಸ್ ಓಟಿಟಿ ವೇದಿಕೆಯನ್ನು ಆರಂಭಿಸಿದ್ದು, ರಾಮಾಯಣ, ಮಹಾಭಾರತದಂತಹ ಅತ್ಯುತ್ತಮ ಕಾರ್ಯಕ್ರಮಗಳು ಈ ವೇದಿಕೆಯಲ್ಲಿ ಲಭ್ಯವಿವೆ. ಪ್ರಸಾರ ಭಾರತಿಯು 'ವೇವ್ಸ್ ಓಟಿಟಿ'ಯನ್ನು ಆರಂಭಿಸಿದ್ದು, ದೂರದರ್ಶನ ಮತ್ತು ಆಕಾಶವಾಣಿಯ ಎಲ್ಲಾ ವಾಹಿನಿಗಳ ಕಾರ್ಯಕ್ರಮಗಳನ್ನು ವೀಕ್ಷಿಸಬಹುದು. ದೂರದರ್ಶನ ಹಾಗೂ ಆಕಾಶವಾಣಿಯ ಸುಪ್ರಸಿದ್ಧ ಕಾರ್ಯಕ್ರಮಗಳು ಸೇರಿದಂತೆ ವಿವಿಧ ಭಾಷೆಗಳ ಚಲನಚಿತ್ರಗಳು ಈ ವೇದಿಕೆಯಲ್ಲಿ ಲಭ್ಯವಿವೆ. ಪ್ಲೇ ಸ್ಟೋರ್ ನಲ್ಲಿ ವೇವ್ಸ್ ಓಟಿಟಿ ಆಪ್ ಅನ್ನು ಡೌನ್ ಲೋಡ್ ಮಾಡಿಕೊಂಡು ಕಾರ್ಯಕ್ರಮಗಳನ್ನು ವೀಕ್ಷಿಸಬಹುದಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**